**ಸಾಕ್ಷಿಯನ್ನು ದಿಃ 05.01.2026 ರಂದು ಕರೆಸಿ ಪ್ರಮಾಣವಚನ ಭೋದಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಈ.ಬಿ.ಆರ್ ವಕೀಲರಿಂದಃ-**

ಈ ಕೇಸ್ ನ ಪ್ರತಿವಾದಿಗಳು ನೊಟೀಸು ಕೊಟ್ಟಿದ್ದ ವಿಚಾರ ಗೊತ್ತಿರುತ್ತದೆ. ಅದಕ್ಕೆ ನಾನು ರಿಪ್ಲೆ ಕೊಟ್ಟಿರುತ್ತೇನೆ. ಪ್ರತಿವಾದಿಗಳು ಲೀಗಲ್ ನೊಟೀಸು ಕೊಡುವುದಕ್ಕೊ ಮೊದಲು ನಾನು ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಕ್ರಯ ಪತ್ರ ಬರೆದುಕೊಳ್ಳಲು ಸಿದ್ದನಿದ್ದೇನೆ ಎಂದು ಯಾವುದಾದರೂ ಕ್ರಮ ತೆಗೆದುಕೊಂಡಿದ್ದಿರಾ ಎಂದರೆ ಸಾಕ್ಷಿ ಫೋನ್ ಮಾಡಿ ವಿಚಾರಿಸಿದ್ದೆ ಮತ್ತು ಕೇಳಿಕೊಂಡಿದ್ದೆ ಎನ್ನುತ್ತಾರೆ. ಹಾಗೆ ಫೋನ್ ಮಾಡಿ ವಿಚಾರಿಸಿದ್ದೆ ಎಂಬ ವಿಷಯವನ್ನು ಇದೆ ಮೊದಲ ಬಾರಿಗೆ ನ್ಯಾಯಾಲಯದ ಮುಂದೆ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಲೀಗಲ್ ನೊಟೀಸಿನಲ್ಲಿ ಹೇಳಿರುತ್ತೇನೆ ಎನ್ನುತ್ತಾರೆ. ಲೀಗಲ್ ನೊಟೀಸಿನಲ್ಲಿ ಫೋನ್ ಮಾಡಿದ ವಿಚಾರ ಹೇಳಿದ್ದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಕ್ರಯ ಪತ್ರ ಬರೆಸಿಕೊಳ್ಳಲು ನಾನು ಸಿದ್ದನಿದ್ದೇನೆ ಎಂದು ಯಾವುದೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿಲ್ಲ ಎಂದರೆ ಸರಿ. ಹಾಗೆ ಯಾವುದೆ ದಾಖಲೆ ಹಾಜರು ಪಡಿಸದ ಕಾರಣ ದಾವೆ ಊರ್ಜಿತವಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವೆಯನ್ನು ಸಲ್ಲಿಸಲು ಯಾವುದೆ ವ್ಯಾಜ್ಯ ಕಾರಣ ಇಲ್ಲದಿದ್ದರೂ ಸುಳ್ಳು ವ್ಯಾಜ್ಯ ಕಾರಣ ಸೃಷ್ಟಿ ಮಾಡಿ ದಾವೆ ಸಲ್ಲಿಸಲಾಗಿದೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

(ಭಾಗ್ಯಮ್ಮ)
ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.,ಹುಣಸೂರು.